RNU AIR DHARWAD

JULY 06, 2025

# AKASHAVANI - DHARWAD

# PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಿಗೆ, ಹಸಿರು ಪಥ ಯೋಜನೆ ಹಾಗೂ ರಾಜ್ಯ ನವ ಮಹೋತ್ಸವಕ್ಕೆ, ರಾಜ್ಯಸಭೆ ವಿಪಕ್ಷ ನಾಯಕ, ಮಲ್ಲಿಕಾರ್ಜುನ ಖರ್ಗೆ, ಕಲಬುರ್ಗಿಯ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ, ಪಾಲಿಟೆಕ್ನಿಕ್ ಕಾಲೇಜು ಆವರಣದಲ್ಲಿ ಚಾಲನೆ ನೀಡಿದರು. ರಾಜ್ಯದಲ್ಲಿ ಅರಣ್ಯದ ಪ್ರಮಾಣ, ಕೇವಲ ಶೇಕಡ 21 ರಷ್ಟಿದೆ. ದೇಶದ ಇತರೆ ಭಾಗಗಳಿಗೆ ಹೋಲಿಸಿದರೆ, ಶೇಕಡ 11 ಕ್ಕಿಂತ, ಕಡಿಮೆ ಇದೆ. ನಿಗದಿತ ಮಾನದಂಡಗಳ ಪ್ರಕಾರ, ಅರಣ್ಯ ಪ್ರಮಾಣ ಕನಿಷ್ಠ ಶೇಕಡ 33 ರಷ್ಟಿರಬೇಕು, ಎಂದು, ಮಲ್ಲಿಕಾರ್ಜುನ ಖರ್ಗೆ ನುಡಿದರು.

<><><>

ಏರೋ ಸ್ಪೇಸ್ ಮತ್ತು ರಕ್ಷಣಾ ಕ್ಷೇತ್ರದಲ್ಲಿ ಭಾರತ ಮಹತ್ತರ ಸಾಧನೆ ಮಾಡಿದೆ. ಮುಂದುವರೆದ ರಾ ್ಟಗಳಿಗೆ ರಕ್ಷಣಾ ಸಲಕರಣೆಗಳನ್ನು ಸರಬರಾಜು ಮಾಡುವ ಸಾಮರ್ಥ್ಯ ಹೊಂದಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಖಾತೆ ಸಚಿವರಾದ ಪೀಯೂಶ್ ಗೋಯಲ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ಕೈಗಾರಿಕಾ ಪ್ರದೇಶದ, ಏರೋಸ್ಪೇಸ್ ಎಸ್.ಇ.ಜೆಡ್ ಗೆ ಭೇಟಿ ನೀಡಿ, ಕೈಗಾರಿಕೋದ್ಯಮಿಗಳೊಂದಿಗೆ ಸಂವಾದ ನಡೆಸಿ, ಅವರು ಮಾತನಾಡಿದರು.

<><><>

ಧ್ವನಿ: ಪಿಯೂಷ್ ಗೋಯಲ್ 32 ಸೆಕೆಂದುಗಳು

<><><>

ವರದಾ ಮತ್ತು ಬೇಡ್ತಿ ನದಿಗಳ ಜೋಡಣೆಗೆ ರಾಜ್ಯ ಸರ್ಕಾರ ಡಿಪಿಆರ್ ತಯಾರಿಸಿ, ಸಚಿವ ಸಂಪುಟದ ಅನುಮೋದನೆ ಪಡೆದರೆ, ಕೇಂದ್ರದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ಸರಬರಾಜು ಖಾತೆ ಸಚಿವ ಪ್ರಹ್ಲಾದ ಜೋಶಿ ಹೇಳಿದ್ದಾರೆ. ಹಾವೇರಿ ಜಿಲ್ಲೆ ಚಳ್ಳಾಳ ಗ್ರಾಮದಲ್ಲಿ ಮಾತನಾಡಿದ ಅವರು, ಶಿಗ್ಗಾಂವಿ-ಸವಣೂರ ವಿಧಾನಸಭಾ ಕ್ಷೇತ್ರದ, ಆರೋಗ್ಯ ಕೇಂದ್ರಗಳಿಗೆ, ಆಯು ್ಮಾನ್ ಯೋಜನೆಯಡಿ ತಲಾ 55 ಲಕ್ಷ ರೂಪಾಯಿ ಅನುದಾನ ಬಿಡುಗಡೆಗೊಳಿಸಲಾಗಿದೆ ಎಂದರು.

<><><>

ಬಿ.ಆರ್. ಅಂಬೇಡ್ಕರ್, ಕಾರ್ಮಿಕ ಸಹಾಯ ಹಸ್ತ ಯೋಜನೆಯಡಿ, ಅಸಂಘಟಿತ ವಲಯದ ಕಾರ್ಮಿಕರಿಗೆ, ರಾಜ್ಯ ಸರ್ಕಾರ ಆರ್ಥಿಕ ನೆರವು ನೀಡುತ್ತಿದೆ ಎಂದು, ಕಾರ್ಮಿಕ ಖಾತೆ ಸಚಿವ ಸಂತೋಷ ಲಾಡ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ, ವಿವಿಧ ವಲಯದ ಕಾರ್ಮಿಕರಿಗೆ, ಸ್ಮಾರ್ಟ್ ಕಾರ್ಡ್ ವಿತರಿಸಿ, ಮಾತನಾಡಿದರು. ಆಶಾದೀಪ ಯೋಜನೆ ಅಡಿ, ಎರಡು ವ ್ಷಗಳ ಕಾಲ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಯುವಜನರಿಗೆ, ಮಾಸಿಕ ಏಳು ಸಾವಿರ ರೂಪಾಯಿ ನೀಡಲಾಗುತ್ತಿದೆ. ಇದು ದೇಶದಲ್ಲಿಯೇ ಮಾದರಿ ಯೋಜನೆಯಾಗಿದೆ ಎಂದರು.

<><><>

ಇಂದು ಆಷಾಢ ಏಕಾದಶಿ, ಆಷಾಢ ಮಾಸದ ಮೊದಲ ಏಕಾದಶಿಯನ್ನು ದೇವಶಯನಿ ಏಕಾದಶಿ ಎಂದೂ ಕರೆಯಲಾಗುತ್ತದೆ. ನಾಡಿನ ಶ್ರೀ ವಿಠಲ ಹಾಗೂ ರುಕುಮಾಯಿ ಮಂದಿರಗಳಲ್ಲಿ, ವಿಶೇಷ ಪೂಜೆ, ಧಾರ್ಮಿಕ ಕೈಂಕರ್ಯಗಳು ಜರುಗುತ್ತಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದ, ಶ್ರೀ ಪಾಂಡುರಂಗ ಸ್ವಾಮಿ ದೇವಸ್ಥಾನದಲ್ಲಿ, ಆಷಾಢ ಏಕಾದಶಿ ಪ್ರಯುಕ್ತ ಪಲ್ಲಕ್ಕಿ ಉತ್ಸವ ಜರುಗಿತು. ನೆಲಮಂಗಲ ತಾಲೂಕು ಅರಿಶಿನಕುಂಟೆ, ಶ್ರೀ

ವಿಶ್ವರೂಪ ವಿಜಯವಿಠಲ ಸ್ವಾಮಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ಜರುಗಿತು. ಆಷಾಢ ಏಕಾದಶಿ ಹಿನ್ನೆಲೆ, ಪಂಢರಪುರದ ಶ್ರೀ ವಿಠೋಬಾ ಹಾಗೂ ರುಕುಮಾಯಿ ದೇವಸ್ಥಾನದಲ್ಲಿ, ಸಹಸ್ರಾರು ವಾರಕರಿ ಸಂತರು, ಶ್ರದ್ಧೆಯಿಂದ ದೇವರ ದರ್ಶನ ಪಡೆಯುತ್ತಿದ್ದಾರೆ.

<><><>

ತ್ಯಾಗ ಹಾಗೂ ಬಲಿದಾನದ ಸಂಕೇತವಾದ ಮೊಹರಂ, ಆಚರಣೆ ಹಿನ್ನೆಲೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದ ಬಾಬಯ್ಯ ದೇವಾಲಯದಲ್ಲಿ ಕೆಂಡ ಹಾರುವ ಆಚರಣೆ ಜರುಗಿತು.

<><><>

ಇಂದು ದೇಶದ, ಹಸಿರು ಕ್ರಾಂತಿಯ ಹರಿಕಾರ, ಮಾಜಿ ಉಪ ಪ್ರಧಾನಮಂತ್ರಿ, ಡಾಕ್ಟರ ಬಾಬು ಜಗಜೀವನ ರಾಮ್ ಅವರ, 39 ನೇ ಪುಣ್ಯಸ್ಮರಣೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಬಾಬು ಜಗಜೀವನ ರಾಮ ಅವರ ಕೊಡುಗೆಗಳನ್ನು ಸ್ಮರಿಸಿದ್ದು, ನಮನಗಳನ್ನು ಸಲ್ಲಿಸಿದ್ದಾರೆ.

<><><>

ಗೃಹ ಲಕ್ಷ್ಮೀ ಯೋಜನೆ ಅಡಿ, ರಾಜ್ಯ ಸರ್ಕಾರ, ಕಲಬುರಗಿ ವಿಭಾಗದ ಜಿಲ್ಲೆಗಳಿಗೆ, 10 ಸಾವಿರ ಕೊಟಿ ರೂಪಾಯಿ, ಫಲಾನುಭವಿಗಳಿಗೆ ನೀಡಿದೆ ಎಂದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ, ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೀದರ್ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಅವರು ತಮ್ಮ ಇಲಾಖೆಯ, ಪ್ರಗತಿ ಪರಿಶೀಲನಾ ಸಭೆ, ನಡೆಸಿದರು.

<><><>

ಗಣಿಗಾರಿಕೆ ಅಕ್ರಮ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕಾಗಿ, ಶೀಘ್ರಗತಿ ನ್ಯಾಯಾಲಯ ಸ್ಥಾಪಿಸಲು, ಸೂಕ್ತ ಶಿಫಾರಸು ನೀಡಲು, ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆಯಲ್ಲಿ, ಸಂಪುಟ ಉಪ ಸಮಿತಿ ರಚನೆಯಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>